# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷಿ/ಸಾಗುವಳಿ ಜಮೀನಿನಲ್ಲಿ ವಿವಿಧ ವಸತಿ ಯೋಜನೆಗಳಡಿ ಮನೆಗಳನ್ನು ನಿರ್ಮಿಸುವ ಬಗ್ಗೆ.

ಓದಲಾಗಿದೆ:

ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಆರ್‌ಜಿಆರ್‌ಹೆಚ್‌ಸಿಎಲ್ 01 ಎಂಐಎಸ್ 06 2009, ದಿನಾಂಕ:10.10.2011.

ಪ್ರಸ್ತಾವನೆ:

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಬಡತನ ರೇಖೆಗಿಂತ ಕೆಳಗಿನ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಜನಾಂಗದ ಬಡಜನರಿಗೆ ರಾಜ್ಯ ಸರ್ಕಾರದ ವಸತಿ ಯೋಜನೆಗಳಾದ ಬಸವ ವಸತಿ ಯೋಜನೆ, ಗ್ರಾಮೀಣ ಅಂಬೇಡ್ಕರ್ ಯೋಜನೆ ಮತ್ತು ಕೇಂದ್ರ ಪುರಸ್ಕೃತ ಇಂದಿರಾ ಆವಾಸ್ ಇತ್ಯಾದಿ ಯೋಜನೆಗಳಡಿ ಮನೆಗಳನ್ನು ನಿರ್ಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಸ್ವಂತ ನಿವೇಶನವುಳ್ಳವರು ಅಥವಾ ಸರ್ಕಾರದ ನಿವೇಶನಗಳ ಯೋಜನೆಯಡಿ ನಿವೇಶನ ಪಡೆದವರು ಮಾತ್ರ ಈ ಯೋಜನೆಗಳಡಿಯಲ್ಲಿ ಮನೆಗಳನ್ನು ನಿರ್ಮಿಸಿಕೊಳ್ಳುತ್ತಿದ್ದಾರೆ. ಆದರೆ, ಕಾರಣಾಂತರಗಳಿಂದ ನಿವೇಶವಗಳನ್ನು ಹೊಂದಿರದ ಬಡಜನರು ಸರ್ಕಾರದ ವಸತಿ ಕಾರ್ಯಕ್ರಮಗಳ ಸೌಲಭ್ಯಗಳಿಂದ ವಂಚಿತರಾಗಿರುತ್ತಾರೆ. ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮಗಳ ಸಮೀಪದ ಸರ್ಕಾರಿ ಜಮೀನನ್ನು ವಿವಿಧ ಇಲಾಖೆಗಳು ಉಪಯೋಗಿಸಿಕೊಳ್ಳುತ್ತಿದ್ದು, ಬಡವರ ಮನೆಗಳ ನಿರ್ಮಾಣಕ್ಕಾಗಿ ಸರ್ಕಾರಿ ಜಮೀನಾಗಲಿ ಅಥವಾ ಖಾಸಗಿ ಜಮೀನಾಗಲಿ ಲಭ್ಯವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ, ಗ್ರಾಮೀಣ ಪ್ರದೇಶಗಳಲ್ಲಿ ನಿವೇಶನವಿಲ್ಲದ ಅರ್ಹ ಫಲಾನುಭವಿಗಳು ತಮ್ಮ ಕೃಷಿ/ಸಾಗುವಳಿ ಜಮೀನಿನಲ್ಲಿ ಮನೆಗಳನ್ನು ನಿರ್ಮಿಸಿಕೊಳ್ಳಲು ಮುಂದೆ ಬಂದರೆ, ಅವರ ಕೃಷಿ ಜಮೀನಿನ ಒಂದು ನಿರ್ದಿಷ್ಟ ಭಾಗದಲ್ಲಿ ಮನೆಯನ್ನು ನಿರ್ಮಿಸಿಕೊಳ್ಳಲು ಅನುಮತಿಸುವ ಪ್ರಸ್ತಾವನೆಯನ್ನು ಸರ್ಕಾರದ ಉನ್ನತ ಮಟ್ಟದಲ್ಲಿ ಪರಿಶೀಲಿಸಲ್ಪಟ್ಟು ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ.

N. 31-1-12
AHM-PS
pls issue a circular

**ಸರ್ಕಾರದ ಆದೇಶ ಸಂ. ವಇ 55 ಹೆಚ್‌ಎಎಸ್ 2011, ಬೆಂಗಳೂರು, ದಿನಾಂಕ: 30ನೇ ಜನವರಿ 2012**

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಸ್ವಂತ ಮನೆ ಅಥವಾ ನಿವೇಶನ ಇಲ್ಲದಿರುವ ಬಡತನ ರೇಖೆಗಿಂತ ಕೆಳಗಿನ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಜನಾಂಗದ ಬಡಜನರು ತಮ್ಮ ಕೃಷಿ/ಸಾಗುವಳಿ ಜಮೀನಿನ ಒಂದು ನಿರ್ದಿಷ್ಟ ಭಾಗದ ಗರಿಷ್ಠ ಎರಡು ಗುಂಟೆ ಜಮೀನಿನಲ್ಲಿ ರಾಜ್ಯ ಸರ್ಕಾರದ ಬಸವ ವಸತಿ ಯೋಜನೆ, ಗ್ರಾಮೀಣ ಅಂಬೇಡ್ಕರ್ ಯೋಜನೆ ಮತ್ತು ಕೇಂದ್ರ ಪುರಸ್ಕೃತ ಇಂದಿರಾ ಆವಾಸ್ ಇತ್ಯಾದಿ ಸರ್ಕಾರಿ ಯೋಜನೆಗಳ ಸಹಾಯಧನದೊಂದಿಗೆ, ವಸತಿ ಯೋಜನೆಗಳಡಿಯಲ್ಲಿರುವ ನಿಯಮಗಳಿಗೆ ಒಳಪಟ್ಟು ಮತ್ತು ಈ ಕೆಳಕಾಣಿಸಿದ ಷರತ್ತು ಮತ್ತು ನಿಬಂಧನೆಗಳಿಗೆ ಅನುಗುಣವಾಗಿ, ಮನೆಗಳನ್ನು ನಿರ್ಮಿಸಿಕೊಳ್ಳಲು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

........2

(ಉ) ಜಮೀನಿನಲ್ಲಿ ಎರಡು ಗುಂಟೆ ಮೀರದಂತೆ ಒಂದು ಬದಿಯಲ್ಲಿನ ನಿರ್ದಿಷ್ಠ ಭಾಗವನ್ನು "ಸರ್ಕಾರದ ವಸತಿ ಯೋಜನೆಯಡಿ ಮನೆ ನಿರ್ಮಾಣಕ್ಕಾಗಿ ಮಾತ್ರ" ಎಂದು ಅನುಮತಿಸಿರುವ ಬಗ್ಗೆ ಸಂಬಂಧಪಟ್ಟ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಿಂದ ದೃಢೀಕರಣ ಪಡೆದು ಸಲ್ಲಿಸತಕ್ಕದ್ದು.

(ಊ) ಹೀಗೆ ಅನುಮತಿಸಿರುವ ಈ ಭಾಗವನ್ನು ವಸತಿಯಲ್ಲದೇ ಬೇರಾವುದೇ ಉದ್ದೇಶಕ್ಕಾಗಿ ಉಪಯೋಗಿಸುವುದಿಲ್ಲವೆಂದು ಮತ್ತು ಈ ಜಮೀನು ಅಥವಾ ಮನೆಯನ್ನು ಕನಿಷ್ಟ 15 ವರ್ಷಗಳವರೆಗೆ ಬೇರೆಯವರಿಗೆ ಮಾರಾಟ/ಭೋಗ್ಯ/ಪರಭಾರೆ ಮಾಡುವುದಿಲ್ಲವೆಂಬ ಬಗ್ಗೆ ಸ್ಟ್ಯಾಂಪು ಕಾಗದದಲ್ಲಿ ಮುಚ್ಚಳಿಕೆ ಬರೆದುಕೊಡಬೇಕು.

(ಋ) ಈ ಮೇಲ್ಕಂಡ ಷರತ್ತುಗಳಲ್ಲದೇ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ (ನಿಯಮಿತ) ದವರು ವಿಧಿಸುವ ಷರತ್ತುಗಳನ್ನೂ ಸಹ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಶಂಕರಪ್ಪ) 3/1
ಪೀಠಾಧಿಕಾರಿ–2, ವಸತಿ ಇಲಾಖೆ.

---

1. ~~ಮಹಾಲೇಖಪಾಲರು (ಲೆಕ್ಕಪತ್ರ 1 ಮತ್ತು 2), ಕರ್ನಾಟಕ, ಬೆಂಗಳೂರು~~
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
4. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿ., ಐ.ಟಿ.ಪಾರ್ಕ್, ರಾಜಾಜಿನಗರ, ಬೆಂಗಳೂರು –44. ಇವರು ಈ ಸರ್ಕಾರಿ ಆದೇಶವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಒಂದು ಸುತ್ತೋಲೆಯನ್ನು ಸಂಬಂಧಪಟ್ಟ ಅನುಷ್ಠಾನಾಧಿಕಾರಿಗಳಿಗೆ ಹಾಗೂ ಪಂಚಾಯತಿರಾಜ್ ಸಂಸ್ಥೆಗಳಿಗೆ ಹೊರಡಿಸುವುದು.
5. ನೊಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಶಿಂಷಾ ಭವನ, ಜಯನಗರ 8ನೇ ಬ್ಲಾಕ್, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
8. ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಣಾಧಿಕಾರಿಗಳು.
9. ಎಲ್ಲಾ ವಿಭಾಗಾಧಿಕಾರಿಗಳು.

(6–9:) *ನಿಗಮದ ಮುಖಾಂತರ ಕಳುಹಿಸಲಾಗಿದೆ.*

...... 4